RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-III<br>Part-III | ಬೆಂಗಳೂರು, ಬುಧವಾರ, ಅಕ್ಟೋಬರ್ ೨೬, ೨೦೧೬ (ಕಾರ್ತೀಕ ೪, ಶಕ ವರ್ಷ ೧೯೩೮)<br>Bengaluru, Wednesday, October 26, 2016 (Karthika 4, Shaka Varsha 1938) | ನಂ. ೧೧೯೮<br>No. 1198 |
|---|---|---|

**ರಾಜ್ಯ ಚುನಾವಣಾ ಆಯೋಗ, ಕರ್ನಾಟಕ**

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ : ರಾಚುಆ 125 ಇಯುಬಿ 2016**
**ಬೆಂಗಳೂರು, ದಿನಾಂಕ.26-10-2016**

ರಾಜ್ಯ ಚುನಾವಣಾ ಆಯೋಗವು ಈ ಕೆಳಗೆ ನಮೂದಿಸಿರುವ ಚುನಾವಣಾ ವೇಳಾಪಟ್ಟಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.146 (ಲಕ್ಕಸಂದ್ರ ವಾರ್ಡ್) ರಲ್ಲಿ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ಚುನಾವಣೆ) ನಿಯಮಗಳು 1979 ರ ನಿಯಮ 3 (1) ರಂತೆ ಆದೇಶಿಸಿದೆ.

**ಚುನಾವಣಾ ವೇಳಾಪಟ್ಟಿ**

| | | |
|---|---|---|
| 1 | ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ರವರು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 02-11-2016 (ಬುಧವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 09-11-2016 (ಬುಧವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 10-11-2016 (ಗುರುವಾರ) |
| 4 | ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 12-11-2016 (ಶನಿವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ) | 20-11-2016 (ಭಾನುವಾರ) |
| 6 | ಮರುಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ | 22-11-2016 (ಮಂಗಳವಾರ) |
| 7 | ಮತ ಎಣಿಕೆಯು ಬೆಳಿಗ್ಗೆ 8.00 ಗಂಟೆಯಿಂದ | 23-11-2016 (ಬುಧವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 23-11-2016 (ಬುಧವಾರ) |

ಆಯುಕ್ತರು, ಬಿ.ಬಿ.ಎಂ.ಪಿ. ರವರು ಆಯೋಗವು ಆದೇಶಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ಚುನಾವಣೆ) ನಿಯಮಗಳು 1979ರ ನಿಯಮ 10ರ ಪ್ರಕಾರ ಅಧಿಸೂಚನೆಯನ್ನು ಪ್ರಪತ್ರ-1 ರಂತೆ ಹೊರಡಿಸತಕ್ಕದ್ದು. ಹಾಗೆಯೇ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯನ್ನು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧ ಪಟ್ಟ ವಾರ್ಡ್ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ 1 ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಅವರಿಗೆ ಸೂಚನೆಗಳನ್ನು ನೀಡತಕ್ಕದ್ದು. ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

ಸದಾಚಾರ ಸಂಹಿತೆಯು ದಿ:26-10-2016 ರಿಂದಲೇ ಜಾರಿಗೆ ಬಂದಿದ್ದು ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೆ ಅಂದರೆ ದಿನಾಂಕ:23-11-2016 ರವರೆಗೆ ಚುನಾವಣೆ ನಡೆಯುವ ಬಿ.ಬಿ.ಎಂ.ಪಿ. ವಾರ್ಡ್ 146ರ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ಜಿಲ್ಲಾ ಚುನಾವಣಾಧಿಕಾರಿಯವರು ಕ್ರಮವಹಿಸತಕ್ಕದ್ದು.

ಆದೇಶಾನುಸಾರ

**ನಾಗರಾಜು ಎನ್.ಆರ್.**
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ
ಕರ್ನಾಟಕ, ಬೆಂಗಳೂರು

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 25

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| ಭಾಗ-III | ಬೆಂಗಳೂರು, ಬುಧವಾರ, ಅಕ್ಟೋಬರ್ ೨೬, ೨೦೧೬ (ಕಾರ್ತೀಕ ೪, ಶಕ ವರ್ಷ ೧೯೩೮) | ನಂ. ೧೧೯೯ |
|---|---|---|
| Part-III | Bengaluru, Wednesday, October 26, 2016 (Karthika 4, Shaka Varsha 1938) | No. 1199 |



**ರಾಜ್ಯ ಚುನಾವಣಾ ಆಯೋಗ, ಕರ್ನಾಟಕ**

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ : ರಾಚುಆ 117 ಇಯುಬಿ 2016**
**ಬೆಂಗಳೂರು, ದಿನಾಂಕ. 26-10-2016**

ರಾಜ್ಯ ಚುನಾವಣಾ ಆಯೋಗವು ಕೆಳಗೆ ನಮೂದಿಸಿರುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವಿವಿಧ ಕಾರಣಗಳಿಂದ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಈ ಕೆಳಗಿನ ಚುನಾವಣಾ ವೇಳಾಪಟ್ಟಿಯಂತೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ರ ನಿಯಮ 3 (1) ರಂತೆ ಆದೇಶಿಸಿದೆ.

| ಕ್ರ.ಸಂ | ಜಿಲ್ಲೆಯ ಹೆಸರು | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ನಂ. |
|---|---|---|---|
| 1 | ದಾವಣಗೆರೆ | ಹರಿಹರ ನಗರಸಭೆ | 18 |
| 2 | ಶಿವಮೊಗ್ಗ | ಭದ್ರಾವತಿ ನಗರಸಭೆ | 31 |
| 3 | ಗದಗ | ಮುಳಗುಂದ ಪಟ್ಟಣ ಪಂಚಾಯತಿ | 1 |
| 4 | ಬೆಳಗಾವಿ | ಗೋಕಾಕ್ ನಗರಸಭೆ | 5 |
| 5 | ಬಾಗಲಕೋಟೆ | ಅಮೀನಗಡ ಪಟ್ಟಣಪಂಚಾಯತಿ | 7 |
| 6 | ಉತ್ತರಕನ್ನಡ | ಕಾರವಾರ ನಗರಸಭೆ | 10 |
| 7 | ಧಾರವಾಡ | ಕಲಘಟಗಿ ಪಟ್ಟಣ ಪಂಚಾಯತಿ | 4 |
| 8 | ವಿಜಯಪುರ | ಬಸವನಬಾಗೇವಾಡಿ ಪುರಸಭೆ | 10 |
| 9 | ಬಳ್ಳಾರಿ | ಮರಿಯಮ್ಮನಹಳ್ಳಿ ಪಟ್ಟಣಪಂಚಾಯತಿ | 12 |
| 10 | ಹಾವೇರಿ | ಹಾವೇರಿ ನಗರಸಭೆ | 4 |
| | | ಹಾನಗಲ್ ಪುರಸಭೆ | 6 |

**ಚುನಾವಣಾ ವೇಳಾಪಟ್ಟಿ**

| | | |
|---|---|---|
| 1 | ಜಿಲ್ಲಾಧಿಕಾರಿಗಳು, ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 02–11–2016 (ಬುಧವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 09–11–2016 (ಬುಧವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 10–11–2016 (ಗುರುವಾರ) |
| 4 | ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 12–11–2016 (ಶನಿವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ) | 20–11–2016 ಭಾನುವಾರ) |
| 6 | ಮರುಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ | 22–11–2016 (ಮಂಗಳವಾರ) |
| 7 | ಮತ ಎಣಿಕೆಯು ಬೆಳಿಗ್ಗೆ 8.00 ಗಂಟೆಯಿಂದ | 23–11–2016 (ಬುಧವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 23–11–2016 (ಬುಧವಾರ) |

ಜಿಲ್ಲಾಧಿಕಾರಿಗಳು, ದಾವಣಗೆರೆ, ಶಿವಮೊಗ್ಗ, ಗದಗ, ಬೆಳಗಾವಿ, ಬಾಗಲಕೋಟೆ, ಉತ್ತರಕನ್ನಡ, ಧಾರವಾಡ, ವಿಜಯಪುರ, ಹಾವೇರಿ, ಮತ್ತು ಬಳ್ಳಾರಿ ಜಿಲ್ಲೆ ರವರು ಆಯೋಗವು ಆದೇಶಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರ್‌ಗಳ ಚುನಾವಣೆ) ನಿಯಮಗಳು, 1977 ರ ನಿಯಮ 8 ರ ಪ್ರಕಾರ ಅಧಿಸೂಚನೆಯನ್ನು ಪ್ರಪತ್ರ–1 ರಂತೆ ಹೊರಡಿಸತಕ್ಕದ್ದು. ಹಾಗೆಯೇ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯನ್ನು ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧಪಟ್ಟ ವಾರ್ಡ್ / ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ –1 ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಅವರಿಗೆ ಸೂಚನೆಗಳನ್ನು ನೀಡತಕ್ಕದ್ದು. ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

ಸದಾಚಾರ ಸಂಹಿತೆಯು ದಿನಾಂಕ: 26–10–2016 ರಿಂದ ಜಾರಿಗೆ ಬಂದಿದ್ದು, ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೆ ಅಂದರೆ ದಿನಾಂಕ:23–11–2016 ರವರೆಗೆ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡು ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ಜಿಲ್ಲಾ ಚುನಾವಣಾಧಿಕಾರಿಯವರು ಕ್ರಮವಹಿಸತಕ್ಕದ್ದು.

ಆದೇಶಾನುಸಾರ

**ನಾಗರಾಜು ಎನ್.ಆರ್.**
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ
ಕರ್ನಾಟಕ, ಬೆಂಗಳೂರು

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 25